ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಬೀದರ್ ಜಿಲ್ಲೆಯಲ್ಲಿ ಎಸ್.ಸಿ.ಪಿ/ಟಿ.ಎಸ್.ಪಿ ಕಾಮಗಾರಿಗಳ ಬಗ್ಗೆ

ಶ್ರೀ ಅರವಿಂದಕುಮಾರ್ ಅರಳಿ (ವಿಧಾನಸಭೆಯಿಂದಚುನಾಯಿತರಾದವರು):-

161(264) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2016 ರಿಂದ 2019ವರೆಗಿನ ಅವಧಿಯಲ್ಲಿ ಬೀದರ್ ಜಿಲ್ಲೆಯಲ್ಲಿ ಜರುಗಿದ ಎಸ್.ಸಿ.ಪಿ/ಟಿ.ಎಸ್.ಪಿ ಕಾಮಗಾರಿಗಳು ನಿಯಮಾನುಸಾರ ನಡೆದಿವೆಯೇ ; ನಡೆದಿದ್ದಲ್ಲಿ ಆ ಕಾಮಗಾರಿಗಳ (ಔರಾದ, ಬೀದರ್, ಭಾಲ್ಕಿ) ಪ್ರತ್ಯೇಕ ವಿವರ ನೀಡುವುದು;

(ಆ) ನಿಯಮಾನುಸಾರ ಜರುಗದ ಕಾಮಗಾರಿಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಅಂತಹ ಕಾಮಗಾರಿಗಳನ್ನು ಮಾಡಿದಂತಹ ಅಧಿಕಾರಿಗಳ ವಿರುದ್ಧ ಎಸ್.ಸಿ.ಪಿ/ಟಿ.ಎಸ್.ಪಿ ಕಾಯ್ದೆ 2013ರ ಅನ್ವಯ ಪ್ರಕರಣ ದಾಖಲು ಮಾಡಲಾಗಿದೆಯೇ ; ಪ್ರಕರಣ ದಾಖಲಿಸದಿರಲು ಕಾರಣವೇನು ? (ವಿವರ ನೀಡುವುದು)